ಪತ್ರಿಕಾ ತುಣುಕುಗಳು

**PAPER CLIPPINGS**

2

ಇಲಾಖೆ / ವಿಷಯ : DEPARTMENT / SUBJECT: ಕರ್ನಾಟಕ ವಿಧಾನ ಮಂಡಲ ಅಧಿವೇಶನ

ಪತ್ರಿಕೆಯ ಹೆಸರು : NAME OF THE NEWS PAPER: ಸಂಯುಕ್ತ ಕರ್ನಾಟಕ ದಿನಾಂಕ : DATE : 21/8/20

# ಎಸ್‌ಡಿಪಿಐ ನಿಷೇಧಕ್ಕೆ ಹೆಜ್ಜೆ

21/8/20 21/8/20

ಸಂ.ಕ. ಸಮಾಚಾರ ಬೆಂಗಳೂರು

ಬೆಂಗಳೂರಿಗೆ ಬೆಂಕಿ ಹಚ್ಚಲು ಕಾರಣವಾದ ಸಂಘಟನೆಯನ್ನು ನಿಷೇಧಿಸಲೇಬೇಕು. ಈ ಬಗ್ಗೆ ಸೂಕ್ತ ನಿರ್ಧಾರ ತೆಗೆದುಕೊಳ್ಳಲೇಬೇಕು ಎಂದು ಸಚಿವ ಸಂಪುಟದಲ್ಲಿ ಬಹುತೇಕ ಸಚಿವರು ಪಟ್ಟು ಹಿಡಿದಿದ್ದಾರೆ.

ಎಸ್‌ಡಿಪಿಐ ಸಂಘಟನೆ ರಾಜ್ಯದಲ್ಲಿ ಹಲವಾರು ಕ್ರಿಮಿನಲ್ ಪ್ರಕರಣಗಳಲ್ಲಿ ಭಾಗಿಯಾಗಿ ರಾಜ್ಯದಲ್ಲಿ ಅಶಾಂತಿ ಮೂಡಿಸಿದೆ. ಅಲ್ಪಸಂಖ್ಯಾತ ಸಮುದಾಯದ ಯುವಕರನ್ನು ದಾರಿ ತಪ್ಪಿಸಿ ಸಮಾಜದಲ್ಲಿ ಅಶಾಂತಿಯ ವಾತಾವರಣ ನಿರ್ಮಾಣ ಮಾಡುತ್ತಿದೆ. ಇಂತಹ ಸಂಘಟನೆಯನ್ನು ನಿಷೇಧಿಸುವುದೇ ಸೂಕ್ತ ಎಂದು ಸಚಿವ ಸಂಪುಟ ಸಭೆಯಲ್ಲಿ ಅಭಿಪ್ರಾಯಪಡಲಾಗಿದೆ.

ಈ ಸಂಘಟನೆಯು ಬೆಂಗಳೂರು ಮಾತ್ರವಲ್ಲದೆ, ಮೈಸೂರು, ಚಾಮರಾಜನಗರ, ಮಂಗಳೂರು, ಕೊಡಗು ಜಿಲ್ಲೆಗಳಲ್ಲೂ ಗಲಭೆ ಸೃಷ್ಟಿಸಿರುವುದಲ್ಲದೆ, 20ಕ್ಕೂ ಹೆಚ್ಚು ಕೊಲೆ ಪ್ರಕರಣದಲ್ಲಿ ಭಾಗಿಯಾಗಿರುವ ಆರೋಪ ಎದುರಿಸುತ್ತಿದೆ. ಕೊರೊನಾ ಸೋಂಕು ಹೆಚ್ಚಳವಾಗುತ್ತಿದ್ದ ಸಂದರ್ಭದಲ್ಲಿ ಪಾದರಾಯನಪುರದಲ್ಲಿ ಸೀಲ್‌ಡೌನ್ ಮಾಡಿದ್ದ ಸಂದರ್ಭದಲ್ಲಿ ಆರೋಗ್ಯ ಕಾರ್ಯಕರ್ತರು, ಕೊರೊನಾ ವಾರಿಯರ್ಸ್ ಮೇಲೆ ಹಲ್ಲೆ ಮಾಡಿಸುವ ಮೂಲಕ ಒಂದು ಸಮುದಾಯದ ಯುವಕರನ್ನು ದಾರಿ ತಪ್ಪಿಸುವ ಕಾರ್ಯ ಮಾಡಿದೆ ಎಂಬ ಬಗ್ಗೆ ಚರ್ಚೆಯಾಗಿದೆ.

ಪ್ರಸ್ತುತ ಸಂಘಟನೆ ರಾಜಕೀಯ ಪಕ್ಷವಾಗಿಯೂ ಬಲವಾಗುತ್ತಿದೆ. ಈಗ ಅದು ರಾಜಕೀಯ ಪಕ್ಷವಾಗಿ ಹೊರಹೊಮ್ಮಿದೆ. ಬೆಂಗಳೂರಿನ ಕೆಲವೆಡೆ ತನ್ನ ಅಸ್ತಿತ್ವ ಪಡೆದುಕೊಳ್ಳುತ್ತಿದೆ. ಆ ಪಕ್ಷದವರು ಪಾಲಿಕೆ ಸದಸ್ಯರೂ ಆಗಿದ್ದಾರೆ. ಮುಂದೆಯೂ ತನ್ನ ಅಸ್ತಿತ್ವವನ್ನು ವಿಸ್ತರಿಸಿಕೊಳ್ಳುವ ಬಗ್ಗೆ ಕಾರ್ಯೋನ್ಮುಖವಾಗಿದೆ. ತನ್ನ ಅಸ್ತಿತ್ವವನ್ನು ಹೆಚ್ಚಿಸಿಕೊಳ್ಳಲು ವಾಮ ಮಾರ್ಗ ಅನುಸರಿಸುತ್ತಿದೆ. ಇದಕ್ಕೆ ಕಡಿವಾಣ ಹಾಕಬೇಕಾದಲ್ಲಿ ಎಸ್‌ಡಿಪಿಐ ಜೊತೆಗೆ ಎಸ್‌ಎಫ್‌ಐ ಸಂಘಟನೆಯನ್ನೂ ನಿಷೇಧ ಮಾಡಬೇಕು. ಈ ಎರಡೂ ಸಂಘಟನೆಗಳು ಸಮಾಜಕ್ಕೆ ಅನುಕೂಲ ಮಾಡುವಂತಹ ಯಾವುದೇ ಕಾರ್ಯ ಮಾಡುತ್ತಿಲ್ಲ ದೇಶದಲ್ಲಿ ವಿಧ್ವಂಸಕ ಕೃತ್ಯಗಳನ್ನು ಎಸಗುವಂತಹ ಸಂಘಟನೆಗಳ ಜೊತೆ ಸಂಪರ್ಕ ಸಾಧಿಸುತ್ತಿವೆ. ಅದರಲ್ಲೂ ಸಣ್ಣ ಪುಟ್ಟ ಪ್ರಮಾಣದ ಘಟನೆಯನ್ನು ವಿವಾದಕ್ಕೆಡೆ ಮಾಡಿ ಸಮಾಜದಲ್ಲಿ ಅಶಾಂತಿ ವಾತಾವರಣವನ್ನು ಸೃಷ್ಟಿಸುತ್ತಿದೆ. ಇಂತಹ ಸಂಘಟನೆ ರಾಜ್ಯದಲ್ಲಿ ಇರಬಾರದು. ಕೂಡಲೇ ನಿಷೇಧ ಮಾಡಲು ಕ್ರಮ ಕೈಗೊಳ್ಳಬೇಕು ಎಂದು ಮುಖ್ಯಮಂತ್ರಿಗಳಿಗೆ ಸಚಿವರು ಆಗ್ರಹಪೂರ್ವಕ ಮನವಿ ಮಾಡಿಕೊಂಡಿದ್ದಾರೆ ಎಂದು ಗೊತ್ತಾಗಿದೆ.



- ರಾಜ್ಯದಲ್ಲಿ 20ಕ್ಕೂ ಹೆಚ್ಚು ಪ್ರಕರಣದಲ್ಲಿ ಭಾಗಿ
- ಅಲ್ಪಸಂಖ್ಯಾತ ಯುವಕರನ್ನು ದಾರಿ ತಪ್ಪಿಸುವ ಕಾರ್ಯ
- ಸಮಾಜದಲ್ಲಿ ಅಶಾಂತಿ ವಾತಾವರಣ ಸೃಷ್ಟಿ ಮಾಡುವ ಹುನ್ನಾರ
- ಬೆಂಗಳೂರಿನಲ್ಲಿ ಗಲಭೆ ಸೃಷ್ಟಿಸಿ ಆತಂಕಕ್ಕೆ ಕಾರಣವಾಗಿರುವುದು
- ಪಾದರಾಯನಪುರದಲ್ಲಿ ಕೊರೊನಾ ವಾರಿಯರ್ಸ್ ಮೇಲೆ ಹಲ್ಲೆ

ಇದಕ್ಕೆ ಮುಖ್ಯಮಂತ್ರಿಗಳು ಪ್ರತಿಕ್ರಿಯಿಸಿ, ಎಸ್‌ಡಿಪಿಐ ಕೇವಲ ಸಂಘಟನೆ ಆಗಿದ್ದರೆ ನಿಷೇಧ ಮಾಡಬಹುದಾಗಿತ್ತು. ಈಗ ಅದು ರಾಜಕೀಯ ಪಕ್ಷವಾಗಿ ಹೊರಹೊಮ್ಮಿದೆ. ಇದರಿಂದ ರಾಜ್ಯ ಸರ್ಕಾರ ನಿಷೇಧ ಮಾಡಲು ಬರುವುದಿಲ್ಲ. ಈ ವಿಷಯದಲ್ಲಿ ಕಾನೂನು ಸಲಹೆ ಪಡೆದುಕೊಳ್ಳಬೇಕಾಗುತ್ತದೆ. ಇದನ್ನು ಪಡೆದುಕೊಂಡು ಸಂಘಟನೆ ಕಾನೂನು ಬಾಹಿರ ಕೃತ್ಯಗಳಲ್ಲಿ ಭಾಗಿಯಾಗಿರುವ ಸಾಕ್ಷ್ಯಗಳೊಂದಿಗೆ ನಿಷೇಧಿಸುವಂತೆ ಕೇಂದ್ರಕ್ಕೆ ಶಿಫಾರಸು ಮಾಡೋಣ. ಕೇಂದ್ರ ಸರ್ಕಾರ ಕೈಗೊಳ್ಳುವ ನಿರ್ಧಾರದವರೆಗೆ ಈ ಸಂಘಟನೆ ಮೇಲೆ ನಿಗಾ ಇರಿಸಲು ಗೃಹ ಇಲಾಖೆಗೆ ಸೂಚಿಸಲಾಗುತ್ತದೆ ಎಂದು ಸಚಿವರಿಗೆ ತಿಳಿಸಿದರು ಎನ್ನಲಾಗಿದೆ.

## ಸೆ. 21ರಿಂದ 10 ದಿನ ಅಧಿವೇಶನ

# ಸಹಕಾರ ಸಂಘಗಳ ಚುನಾವಣೆ ಮುಂದಕ್ಕೆ

ಸಂ.ಕ. ಸಮಾಚಾರ ಬೆಂಗಳೂರು

ಕೊರೊನಾ ಸೋಂಕು ಹರಡುತ್ತಿರುವ ಹಿನ್ನೆಲೆಯಲ್ಲಿ ಪ್ರಸಕ್ತ ಸಾಲಿನಲ್ಲಿ ನಡೆಯಬೇಕಾಗಿದ್ದ ಎಲ್ಲ ಸಹಕಾರ ಸಂಘಗಳ ಚುನಾವಣೆಯನ್ನು ಮುಂದೂಡಲು ನಿರ್ಧಾರ ತೆಗೆದುಕೊಂಡಿರುವ ರಾಜ್ಯ ಸರ್ಕಾರ ಎಲ್ಲ ಸಹಕಾರ ಸಂಘಗಳಿಗೆ ಆಡಳಿತಾಧಿಕಾರಿಯನ್ನು ನೇಮಕ ಮಾಡಲು ತೀರ್ಮಾನ ತೆಗೆದುಕೊಂಡಿದೆ.

ಸಚಿವ ಸಂಪುಟ ಸಭೆಯಲ್ಲಿ ತೆಗೆದುಕೊಂಡ ನಿರ್ಧಾರವನ್ನು ಸಚಿವ ಜೆ.ಸಿ. ಮಾಧುಸ್ವಾಮಿ ಪತ್ರಿಕಾಗೋಷ್ಠಿಯಲ್ಲಿ ಪ್ರಕಟಿಸಿ, ಮಳೆಗಾಲದ ಅಧಿವೇಶನವನ್ನು ಸೆ.21ರಿಂದ ಸೆ.30ರವರೆಗೆ 10 ದಿನಗಳ ಕಾಲ ನಡೆಸಲು ದಿನಾಂಕ ಕೂಡ ನಿಗದಿಪಡಿಸಲಾಗಿದೆ ಎಂದರು.